ರೂ.6834-74 ಲಕ್ಷಗಳು ಇನ್ನೂ ಬಾಕಿ ಇರುತ್ತದೆ. ಬಾಕಿ ಇರುವ ಸಹಾಯಧನವನ್ನು ಶೀಘ್ರದಲ್ಲಿಯೇ ಬಿಡುಗಡೆ ಮಾಡಲಾಗುವುದು.

ವಿಷಯ:- ಮಂಗಳೂರು ಮಹಾನಗರ ಪಾಲಿಕೆಯಲ್ಲಿ ಅಕ್ರಯ ಕಟ್ಟಡಗಳು.

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 178 (18)

ಶ್ರೀ ಕೆ.ಜಯರಾಮಶೆಟ್ಟಿ (ಉಳ್ಳಾಲ):- ಮಾನ್ಯ ನಗರಾಭಿವೃದ್ಧಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವಿರೆ?

ಅ) ಮಂಗಳೂರು ಮಹಾನಗರ ಪಾಲಿಕೆಯಲ್ಲಿ ಬಹುಮಹಡಿ ಕಟ್ಟಡಗಳು ಸೇರಿದಂತೆ ಇತರ ಅಕ್ರಮ ಕಟ್ಟಡ ನಿರ್ಮಾಣವಾಗಿದ್ದು, ಇವುಗಳಲ್ಲಿ ಎಷ್ಟಕ್ಕೆ ಪರವಾನಗಿ ಕೊಡಲಾಗಿದೆ? ಎಷ್ಟನ್ನು ತಿರಸ್ಕರಿಸಲಾಗಿದೆ?

ಆ) ಎಷ್ಟು ಅಕ್ರಮ ಕಟ್ಟಡಗಳಿವೆ ಹಾಗೂ ಎಷ್ಟನ್ನು ಕೆಡವಲಾಗಿದೆ?

ಇ) ಈ ವಿಚಾರದಲ್ಲಿ ಎಲ್ಲಾ ಮಹಾನಗರ ಪಾಲಿಕೆಗಳಿಗೂ ಅನ್ವಯವಾಗುವ ಸಮಾನ ಕಾನೂನನ್ನು ಸರ್ಕಾರ ಅಳವಡಿಸಿಕೊಂಡಿದೆಯೆ, ಕಟ್ಟಡ ಕಟ್ಟುವಾಗ ಆರಂಭಿಕ ಪ್ರಮಾಣ ಪತ್ರ ಪಡೆಯುವ ಬಗ್ಗೆ ಇರುವ ರೂಪರೇಷೆಗಳೇನು?

ಶ್ರೀ ಬಿ.ಎನ್.ಬಚ್ಚೇಗೌಡ (ನಗರಾಭಿವೃದ್ಧಿ ಸಚಿವರು):-

ಅ) 1-4-95ರಿಂದ 31-5-95ರವರೆಗೆ 906 ಕಟ್ಟಡಗಳಿಗೆ ಪರವಾನಗಿ ನೀಡಲಾಗಿದೆ. ಒಂದನ್ನು ತಿರಸ್ಕರಿಸಲಾಗಿದೆ.

ಆ) 61 ಅಕ್ರಮ ಕಟ್ಟಡಗಳಿವೆ. ಅದರಲ್ಲಿ ಮೂರು ಕಟ್ಟಡಗಳನ್ನು ಕೆಡವಲಾಗಿದೆ.

ಇ) ಇಲ್ಲ. ಬೆಂಗಳೂರು ಮಹಾನಗರ ಪಾಲಿಕೆ ಹೊರತುಪಡಿಸಿ ಇತರೆ ಮಹಾನಗರ ಪಾಲಿಕೆಗಳಲ್ಲಿ ಜೋನಲ್ ರೆಗ್ಯೂಲೇಶನ್ ಮತ್ತು ಕೆ.ಟಿ.ಸಿ.ಪಿ. ಕಾಯ್ದೆ 1961ರ ಪ್ರಕಾರ ಆರಂಭಿಕ ಪ್ರಮಾಣ ಪತ್ರ ನೀಡಲಾಗುತ್ತಿದೆ.

ವಿಷಯ:- ಮಂಗಳೂರಿನ ಹಂಪನ ಕಟ್ಟೆಯಲ್ಲಿರುವ ಗ್ರಾಮಾಂತರ ಬಸ್ ನಿಲ್ದಾಣದ ಬಗ್ಗೆ ಕುರಿತು.

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 179 (19)

ಶ್ರೀ ಜಯರಾಮಶೆಟ್ಟಿ (ಉಳ್ಳಾಲ):- ಮಾನ್ಯ ಪೌರಾಡಳಿತ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವಿರೆ?

ಅ) ಮಂಗಳೂರಿನ ಹಂಪನಕಟ್ಟೆಯಲ್ಲಿರುವ ದಕ್ಷಿಣ ಕನ್ನಡ ಜಿಲ್ಲಾ ಗ್ರಾಮಾಂತರ ಬಸ್ ನಿಲ್ದಾಣದಲ್ಲಿ ಪ್ರಯಾಣಿಕರಿಗೆ ಸೌಕರ್ಯ ಒದಗಿಸಿಲ್ಲದಿರುವುದು?

ಆ) ಹೊಸ ಬಸ್ ನಿಲ್ದಾಣದ ಬಗ್ಗೆ ಸರ್ಕಾರ ಯಾವ ನಿರ್ಧಾರ ತೆಗೆದುಕೊಂಡಿದೆ?